ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ : ಬೆಂಅಪ್ರಾ/ನಯೋ/PRL-01/2438 /2024-25
No.

ದಿನಾಂಕ :
Date : 19/12/2024

# ಕಾರ್ಯಾದೇಶ

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರಡಿಯಲ್ಲಿ]

ವಿಷಯ:- ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರು ಕೋರಿರುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 01.04.2024
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 4.3.1/ 2024, ದಿನಾಂಕ 18.07.2024.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-01/1125/2024-25, ದಿನಾಂಕ 29.08.2024.
4. ಕೆನರಾ ಬ್ಯಾಂಕ್ ಚಲನ್ ನಂ. GN24084486, ದಿನಾಂಕ 30.08.2024
5. ತಹಶೀಲ್ದಾರ್ ರವರು ಕೆ.ಆರ್.ಪುರಂ ತಾಲ್ಲೂಕುರವರಿಗೆ ಈ ಕಛೇರಿ ಪತ್ರ ಸಂಖ್ಯೆ ಬೆಂಆಪ್ರಾ/ನಯೋಸ/PRL-01/1125/2024-25 ದಿನಾಂಕ 29.08.2024.
6. ಈ ಕಛೇರಿ ಅ.ಟಿ.ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-01/1992/2024-25, ದಿನಾಂಕ 19.11.2024
7. ಅರ್ಜಿದಾರರ Undertaking ಪತ್ರ ದಿನಾಂಕ 04.12.2024

********

ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರ ಉಲ್ಲೇಖ [1] ರ ಅರ್ಜಿಯಲ್ಲಿ ಕೋರಲಾಗಿರುತ್ತದೆ.

ಉಲ್ಲೇಖ (2) ರಲ್ಲಿ ನಮೂದಿಸಿರುವ ದಿನಾಂಕ 18.07.2024 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 4.3.1/2024 ರಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿರುತ್ತದೆ.

"ಅನುಮೋದಿತ ಮಹಾಯೋಜನೆ RMP-2015 ರಲ್ಲಿ ಪ್ರಶ್ನಿತ ಜಮೀನಿನ ಬಳಿಯಲ್ಲಿ ಉದ್ದೇಶಿತ ಪಿ.ಆರ್.ಆರ್. ರಸ್ತೆ ಪಂಕ್ತೀಕರಣ ಇದ್ದು, ಉಪಆಯುಕ್ತರು (ಭೂಸ್ವಾ) ರವರ ದಿನಾಂಕ 11.03.2024 ರ ಅನೌಪಚಾರಿಕ ಟಿಪ್ಪಣಿಯಲ್ಲಿ ಹೊಸ ಬಡಾವಣೆಗೆ ಗುರುತಿಸಿರುವ ಗ್ರಾಮಗಳಲ್ಲಿ

> ಹಿರಂಡಹಳ್ಳಿ ಗ್ರಾಮ ಇರುವುದರಿಂದ ಈ ಅಂಶಗಳ ಕುರಿತು ಭೂಸ್ವಾಧೀನ ವಿಭಾಗದಿಂದ ವರದಿ ಪಡೆದು, ಪ್ರಶ್ನಿತ ಜಮೀನಿಗೆ ಈಗ ಉಪಗಮನ ರಸ್ತೆಯನ್ನು ಲಗತ್ತಾಗಿರುವ ಸ.ನಂ.ಗಳ ಜಮೀನುಗಳಲ್ಲಿ ನಿರ್ಮಿಸಲಾಗುತ್ತಿದ್ದು, ಪೂರ್ಣವಾಗಿ ರಸ್ತೆಯನ್ನು ಅಭಿವೃದ್ಧಿಪಡಿಸಿ, ಈ ರಸ್ತೆಯು ಸಾರ್ವಜನಿಕ ರಸ್ತೆ ಆಗಿರುವ ಬಗ್ಗೆ ಸ್ಥಳೀಯ ಸಂಸ್ಥೆಗೆ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸಿ, ದೃಢೀಕೃತ ದಾಖಲಾತಿಗಳನ್ನು ಸಲ್ಲಿಸಿದ ನಂತರ, ಪ್ರಶ್ನಿತ ಜಮೀನುಗಳಲ್ಲಿ ಗ್ರಾಮನಕ್ಷೆ ಅನುಸಾರ ನಾಲಾ ಪಂಕ್ತೀಕರಣ ಇದ್ದು, ಭೂದಾಖಲೆಗಳ ಸಹಾಯಕ ನಿರ್ದೇಶಕರು ರವರ ದೃಢೀಕೃತ ಸರ್ವೆ ನಕ್ಷೆಯಲ್ಲಿ ಇಲ್ಲದೇ ಇರುವ ಬಗ್ಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರಿಂದ ವರದಿ ಪಡೆದು ಸಲ್ಲಿಸಿದ ನಂತರ, ಅಗತ್ಯ ಯುಟಿಲಿಟಿಗಳನ್ನು ಪ್ರತ್ಯೇಕವಾಗಿ ಗುರುತಿಸಿ ಹಾಗೂ ಶೇ.10 ರಷ್ಟ ಆರ್ಥಿಕ ದುರ್ಬಲ ವರ್ಗದ ನಿವೇಶನಗಳನ್ನು ಗುರುತಿಸಿ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಕರಡು ವಸತಿ ವಿನ್ಯಾಸ ನಕ್ಷೆ ಸಲ್ಲಿಸಿದ ನಂತರ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು."

ಪ್ರಾಧಿಕಾರದ ಭೂಸ್ವಾಧೀನ ವಿಭಾಗದಿಂದ ಪಿ.ಆರ್.ಆರ್. ಅಲೈನ್ ಮೆಂಟ್ ನಂತೆ ಸರ್ವೆ ನಂ.39 ರಲ್ಲಿ 1ಎ-06ಗುಂ ಜಮೀನು ಒಳಗೊಂಡಿದ್ದು, ಸದರಿ ಸರ್ವೆ ನಂಬರಿನಿಂದ ದುರಸ್ತಾಗಿರುವ ಹೊಸ ಸರ್ವೆ ನಂ.193 ರಲ್ಲಿ ಪಿ.ಆರ್.ಆರ್. ರಸ್ತೆ ಹಾದು ಹೋಗುವುದಿಲ್ಲ. ಹಿರಂಡಹಳ್ಳಿ ಗ್ರಾಮದ ಸರ್ವೆ ನಂ. 193 ರ 4ಎ-00ಗುಂ ಪ್ರದೇಶದ ಬಾಬ್ತು ಪ್ರಾಧಿಕಾರವು ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ ಬಡಾವಣೆಯ ಪ್ರಸ್ತಾವನೆಯ ಪಟ್ಟಿಯಲ್ಲಿ ಹಿರಂಡಹಳ್ಳಿ ಗ್ರಾಮದ ಸರ್ವೆ ನಂ. 39 ರ 97ಎ-32.125ಗುಂ ಜಮೀನು ಒಳಗೊಂಡಿದ್ದು, ಕ್ರಮಸಂಖ್ಯೆ 01 ರಿಂದ 31 ರವರೆಗೆ ಸರ್ವೆ ನಂಬರುಗಳನ್ನು ಗುರುತಿಸಿದ್ದು, ಈ ಪಟ್ಟಿಯಲ್ಲಿ ಸರ್ವೆ ನಂ. 193 ಒಳಗೊಂಡಿರುವುದಿಲ್ಲ ಎಂದು ವರದಿ ಇರುತ್ತದೆ.

ಅರ್ಜಿದಾರರು ಪ್ರಶ್ನಿತ ಹಿರಂಡಹಳ್ಳಿ ಗ್ರಾಮದ ಸರ್ವೆ ನಂ. 193 ರಲ್ಲಿ ಒಟ್ಟು 4ಎ-00ಗುಂ ವಿಸ್ತೀರ್ಣದ ಜಮೀನಿಗೆ 30 ಅಡಿಯ ಸಾರ್ವಜನಿಕ ರಸ್ತೆ ಇರುತ್ತದೆ ಎಂದು ಬಿದರಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ದಿನಾಂಕ 19.07.2024 ರ ದೃಢೀಕರಣ ಪತ್ರ ಹಾಗೂ ಮೆಟಲಿಂಗ್ & ರಸ್ತೆ ಬದಿ ಚರಂಡಿ ಅಭಿವೃದ್ಧಿಯಾಗಿರುವ ಛಾಯಾಚಿತ್ರಗಳನ್ನು ಸಲ್ಲಿಸಿರುತ್ತಾರೆ.

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರು ಕೋರಿರುವ ಬಗ್ಗೆ.

---

ಪ್ರಸ್ತಾವನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3]ರ ಈ ಕಛೇರಿ ಪತ್ರದಲ್ಲಿ ವಿವಿಧ ಶುಲ್ಕಗಳ ಬಾಬ್ತು ಒಟ್ಟು ₹.27,62,570/- [₹ ಇಪ್ಪತ್ತೇಳು ಲಕ್ಷದ ಅರವತ್ತೆರಡು ಸಾವಿರದ ಐದುನೂರ ಎಪ್ಪತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು. ಉಲ್ಲೇಖ [4] ರಲ್ಲಿ ಶುಲ್ಕಗಳನ್ನು ಪ್ರಾಧಿಕಾರದ ಕೆನರಾ ಬ್ಯಾಂಕ್ ಚಲನ್ ನಂ. GN24084486 ರ ಮೂಲಕ ದಿನಾಂಕ 30.08.2024 ರಂದು ಪಾವತಿಸಿರುತ್ತಾರೆ. ಸದರಿ ಮೊತ್ತವು ಪ್ರಾಧಿಕಾರದ ಖಾತೆಗೆ ಸಂದಾಯವಾಗಿರುವ ಬಗ್ಗೆ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 30.08.2024 ರಂದು ದೃಢೀಕರಿಸಿರುತ್ತಾರೆ.

ಪ್ರಶ್ನಿತ ಜಮೀನುಗಳಲ್ಲಿ ಗ್ರಾಮನಕ್ಷೆ ಅನುಸಾರ ಇರುವ ನಾಲಾ ಪಂಕ್ತೀಕರಣಕ್ಕೆ ಅಗತ್ಯ ಬಫರ್ ಕಾಯ್ದಿರಿಸಿ, ಅಗತ್ಯ Utility ಗಳನ್ನು ಪ್ರತ್ಯೇಕವಾಗಿ ಗುರುತಿಸಿ ಶೇ.10 ರಷ್ಟು ಆರ್ಥಿಕ ದುರ್ಬಲ ವರ್ಗದ ನಿವೇಶನಗಳನ್ನು ಗುರುತಿಸಿ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ವಸತಿ ವಿನ್ಯಾಸ ನಕ್ಷೆಯನ್ನು ಸಲ್ಲಿಸಿರುತ್ತಾರೆ.

ಉಲ್ಲೇಖ (5) ರಲ್ಲಿ ನಮೂದಿಸಿರುವ ಈ ಕಛೇರಿ ಪತ್ರದಲ್ಲಿ ಸರ್ಕಾರದ ಸುತ್ತೋಲೆ ಸಂ. ನಅಇ 363 ಬಿ.ಎಂ.ಆರ್ 202(ಇ) ದಿನಾಂಕ 12.02.2024 ರ ಅನುಸಾರ ಪ್ರಶ್ನಿತ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನ ಕುರಿತು ಯಾವುದೇ ವ್ಯಾಜ್ಯ/ಪ್ರಕರಣ/ತಕರಾರುಗಳು ಇದ್ದಲ್ಲಿ 15 ದಿನಗಳೊಳಗಾಗಿ ಮಾಹಿತಿ ನೀಡಲು ತಹಶೀಲ್ದಾರ್ ರವರು, ಕೆ.ಆರ್.ಪುರಂ ರವರನ್ನು ಕೋರಲಾಗಿತ್ತು. ನಿಗದಿತ 15 ದಿನಗಳ ಅವಧಿಯಲ್ಲಿ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಸರ್ಕಾರದ ಸುತ್ತೋಲೆ ಸಂಖ್ಯೆ ನಅಇ 363 ಬಿಎಂಆರ್ 202(ಇ) ದಿನಾಂಕ 12.02.2024 ರ ಅನುಸಾರ ಪ್ರಶ್ನಿತ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ/ಪ್ರಕರಣ/ ತಕರಾರುಗಳು ಇಲ್ಲವೆಂದು ಭಾವಿಸಿ ಅನುಮೋದನೆ ನೀಡಲು ಕ್ರಮವಹಿಸಲಾಗಿದೆ.

ಕರಡು ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ, ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸಲು ಅರ್ಜಿದಾರರಿಗೆ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಸಿಕೊಳ್ಳಲು ಕಾರ್ಯಪಾಲಕ ಅಭಿಯಂತರರು [ಉತ್ತರ ವಿಭಾಗ] ರವರಿಗೆ ಉಲ್ಲೇಖ [6 ] ರ ಈ ಕಛೇರಿ ಪತ್ರದಲ್ಲಿ ತಿಳಿಸಲಾಗಿತ್ತು.

ಉಲ್ಲೇಖ[7] ರಲ್ಲಿ ಸಲ್ಲಿಸಿರುವ Undertaking ಪತ್ರದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಿದ 15 ದಿವಸಗಳೊಳಗಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ಹಸ್ತಾಂತರಿಸಿರುವುದಾಗಿ ತಿಳಿಸಿ ಕಾರ್ಯಾದೇಶ ಹಾಗೂ ಕರಡು ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಿರುತ್ತಾರೆ.

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರು ಕೋರಿರುವ ಬಗ್ಗೆ.

---

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ 15 ದಿವಸಗಳೊಳಗಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ಹಸ್ತಾಂತರಿಸುವ ಷರತ್ತುಗಳಿಗೊಳಪಡಿಸಿ ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನೀಡಲಾಗಿದೆ.

| | |
|---|---|
| 1 | ಸಲ್ಲಿಸಿರುವ ಪ್ರಮಾಣ ಪತ್ರದಂತೆ ಕಾರ್ಯಾದೇಶ ಪಡೆದ 15 ದಿನಗಳ ಒಳಗಾಗಿ ಪರಿತ್ಯಾಜನಾ ಪತ್ರವನ್ನು ಪಡೆದು ಸಲ್ಲಿಸುವುದು. |
| 2 | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 3 | ಪ್ರಸ್ತಾವನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 4 | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ವಿವಿಧ ಅಳತೆಯ ಒಟ್ಟು 63 ವಸತಿ ನಿವೇಶನಗಳಿದ್ದು (07 EWS ನಿವೇಶನಗಳನ್ನೊಳಗೊಂಡಂತೆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೇ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ಅನುಮೋದಿತ ತಾತ್ಕಾಲಿಕ ವಿನ್ಯಾಸ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. |
| 5 | ಅನುಮೋದಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 6 | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನುಗಳಲ್ಲಿ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 7 | ಪ್ರಶ್ನಿತ ಜಮೀನಿಗೆ ಮೆಟಲಿಂಗ್ & ರಸ್ತೆ ಬದಿ ಚರಂಡಿ ಅಭಿವೃದ್ಧಿ ಮಾಡಲಾಗಿರುವ ಉಪಗಮನ ರಸ್ತೆಯನ್ನು ಪೂರ್ತಿಯಾಗಿ ಅಭಿವೃದ್ಧಿಪಡಿಸುವುದು. |
| 8 | ಉದ್ಯಾನವನ ಮತ್ತು ಬಯಲುಜಾಗಗಳನ್ನು ಅನುಮೋದಿತ ತಾತ್ಕಾಲಿಕ ವಿನ್ಯಾಸ ನಕ್ಷೆ ಪ್ರಕಾರ ಶೇ 100. ರಷ್ಟು ನಿವೇಶನಗಳ ಬಿಡುಗಡೆಗೊಳಿಸುವ ಮೊದಲು Chain link Fencing ಮಾಡಿ ಅಳವಡಿಸುವುದು ಹಾಗೂ ಅಭಿವೃದ್ಧಿಪಡಿಸುವುದು. |

| | |
|---|---|
| 9 | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 10 | Buffer ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು |
| 11 | ಪ್ರಶ್ನಿತ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ತಾತ್ಕಾಲಿಕ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 12 | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸುಳ್ಳು ದಾಖಲೆ ಅಥವಾ ಇನ್ನಿತರೆ ಪೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ನೀಡಿರುವ ತಾತ್ಕಾಲಿಕ ವಿನ್ಯಾಸ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 13 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 14 | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು, ಹಸಿ ತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compose ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 15 | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |
| 16 | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 17 | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ಮತ್ತು 17(2-B) ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಿದ ನಂತರ, ಅಂತಿಮವಾಗಿ ವಿನ್ಯಾಸವನ್ನು ಬಿಡುಗಡೆಗೊಳಿಸಲಾಗುವುದು. |
| 18 | ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಅನುಸಾರ ಅಭಿವೃದ್ಧಿಗೊಳಿಸಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-B) ರಲ್ಲಿ ಅಂತಿಮ ಅನುಮೋದನೆ ಮತ್ತು ನಿವೇಶನ ಬಿಡುಗಡೆ ಪಡೆದ ನಂತರ ವಸತಿ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 19 | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರು ಕೋರಿರುವ ಬಗ್ಗೆ.

| | |
|---|---|
| 20 | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದ್ದು. |
| 21 | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಸತಿ ನಿವೇಶನಕ್ಕೆ ಗೃಹ ಬಳಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಒದಗಿಸತಕ್ಕದ್ದು, ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸುವುದು. |
| 22 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 23 | BESCOM ನಿರ್ದೇಶನದಂತೆ ವಸತಿ ವಿನ್ಯಾಸದಲ್ಲಿ ವಿದ್ಯುಚ್ಛಕ್ತಿ ಅಳವಡಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 24 | BWSSB, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 25 | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ Transformer Yard, RWH, STP, OHT, SWM ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |
| 26 | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17[2-A] ರಡಿಯಲ್ಲಿ Demarcation and Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಅಪ್ರಾ, ಬೆಂಗಳೂರು

ಇವರಿಗೆ,
ಶ್ರೀ.ಮಂಜುನಾಥ್ ಹೆಚ್.ಆರ್
ಬಿನ್ ಎಂ. ರಾಜಣ್ಣ
ನಂ. 68, ಹೆಡಕನಹಳ್ಳಿ ಗ್ರಾಮ
ಹೊಸಕೋಟೆ ತಾಲ್ಲೂಕು
ಬೆಂಗಳೂರು ಗ್ರಾಮಾಂತರ ಜಿಲ್ಲೆ

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಹಿರಂಡಹಳ್ಳಿ ಗ್ರಾಮದ ಸ.ನಂ.193(ಹಳೆ ಸರ್ವೆ ನಂ.39/ಪಿ1) ರಲ್ಲಿ 4ಎ-00ಗುಂ ವಿಸ್ತೀರ್ಣದ ಜಮೀನಿನಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2A ರಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಅರ್ಜಿದಾರರಾದ ಶ್ರೀ.ಮಂಜುನಾಥ್ ಹೆಚ್.ಆರ್ ರವರು ಕೋರಿರುವ ಬಗ್ಗೆ.

---

<u>ಪ್ರತಿಯನ್ನು</u>

1. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ, ಕರ್ನಾಟಕ, [RERA], ಸಿಲ್ವರ್ ಜ್ಯೂಬಿಲಿ ಬ್ಲಾಕ್, 3 ನೇ ಕ್ರಾಸ್ ರಸ್ತೆ, ಸಂಪಂಗಿರಾಮನಗರ, ಬೆಂಗಳೂರು-560 002 ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಅಭಿಯಂತರ ಸದಸ್ಯರು, ಬೆಂಆಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ಅನುಮೋದಿತ ವಿನ್ಯಾಸ ನಕ್ಷೆಯನ್ನು ಮಾಹಿತಿಗಾಗಿ ಕಳುಹಿಸಿದೆ.
3. ಕಾರ್ಯಪಾಲಕ ಅಭಿಯಂತರರು, [ಉತ್ತರ ವಿಭಾಗ] ಆರ್.ಟಿ. ನಗರ ವಾಣಿಜ್ಯ ಸಂಕೀರ್ಣ, ಬೆಂಅಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯೊಂದಿಗೆ ಸೂಕ್ತ ಕ್ರಮಕ್ಕಾಗಿ

   ಕಳುಹಿಸುತ್ತಾ, ತಾತ್ಕಾಲಿಕ ವಿನ್ಯಾಸ ನಕ್ಷೆಯಂತೆಯೇ ಬಡಾವಣೆಯು ಅಭಿವೃದ್ಧಿಯಾಗುತ್ತಿರುವ ಬಗ್ಗೆ ನಿಗಾ ವಹಿಸುವುದು.
4. ಕಂದಾಯ ಅಧಿಕಾರಿಗಳು [ಉತ್ತರ ವಿಭಾಗ] ಆರ್.ಟಿ. ನಗರ ವಾಣಿಜ್ಯ ಸಂಕೀರ್ಣ, ಬೆಂಅಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯೊಂದಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಿಸ್ಟಮ್ ಮ್ಯಾನೇಜರ್, EDP ಶಾಖೆ ರವರಿಗೆ ಕಳುಹಿಸುತ್ತಾ, ಇದರೊಂದಿಗೆ ಲಗತ್ತಿಸಿರುವ ಸಿ.ಡಿ.ಯಲ್ಲಿ ದಾಖಲಿಸಲಾದ ವಸತಿ ವಿನ್ಯಾಸ ನಕ್ಷೆಯ ನೀಲಿ ನಕ್ಷೆ ಮತ್ತು ಕಾರ್ಯಾದೇಶ ಇವುಗಳನ್ನು ಪ್ರಾಧಿಕಾರದ Website ನಲ್ಲಿ ಪ್ರಚುರಪಡಿಸಲು ತಿಳಿಸಲಾಗಿದೆ.

ಸೂಚನೆ : 1. ಸಂಬಂಧಪಟ್ಟ ತಾಂತ್ರಿಕ ವಿಷಯ ನಿರ್ವಾಹಕರು, ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಸಿ.ಡಿ. ಯಲ್ಲಿ ದಾಖಲಿಸಿ, ದಾಖಲು ವಿಭಾಗಕ್ಕೆ ನೀಡುವುದು.

2. ಸದರಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ವಿವರಗಳನ್ನು, ಕಾರ್ಯಾದೇಶದ ವಹಿಯ ಪುಟ ಸಂಖ್ಯೆ ರಲ್ಲಿ ನಮೂದಿಸಿದೆ.